## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.428/2018

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಮಲ್ಲತೇಶ | CW:4 | PW: 2 |
| ತಂದೆಯ ಹೆಸರು | : | ಹನುಮಂತಪ್ಪ | | |
| ವಯಸ್ಸು | : | 42 | | |
| ವೃತ್ತಿ | : | ಕೂಲಿ ಕೆಲಸ | | |
| ವಾಸಸ್ಥಳ | : | ದೊಡ್ಡಎತ್ತಿನಹಳ್ಳಿ ಗ್ರಾಮ | | |

ದಿನಾಂಕಃ 19.02.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಚಾಸಾ–5 ಮತ್ತು 8 ರವರು ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗಳಿಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ.

ಸಾಕ್ಷಿಯು 2 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಅಮಾನತ್ತು ಪಂಚನಾಮೆಯಲ್ಲಿ ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅಮಾನತ್ತು ಪಂಚನಾಮೆಯನ್ನು ನಿಪಿ–3 ಎಂದು, ಸಾಕ್ಷಿಯ ಸಹಿಯನ್ನು ನಿಪಿ–3(ಎ) ಎಂದು ಗುರುತಿಸಲಾಯಿತು. 2 ಛಾಯಾಚಿತ್ರಗಳನ್ನು ನಿಪಿ–4 ಮತ್ತು 5 ಎಂದು, ಸಿಡಿಯನ್ನು ನಿಪಿ–6 ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿಃ 11-03-2018 ರಂದು ನ್ಯಾಮತಿ ಪೊಲೀಸ್ ಠಾಣಾ ಆವರದ್ಲಿ ನನ್ನ ಹಾಗೂ ಚಾಸಾ-5 ಮತ್ತು 8 ರವರ ಸಮಕ್ಷಮ ಮಧ್ಯಾಹ್ಣ 3.30 ರಿಂದ 4.15 ಗಂಟೆ ಸಮಯದಲ್ಲಿ ಕೆಎ-17-ಪಿ-8738 ಮಾರುತಿ ಒಮಿನಿಯನ್ನು ನಮ್ಮಗಳ ಸಮಕ್ಷಮದಲ್ಲಿ ವಶಪಡಿಸಿಕೊಂಡು ನಿಪಿ-4 ಮತ್ತು 5 ರಂತೆ ಪೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಈ ಪ್ರಕರಣದ ಸಂಬಂಧ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.